ಅ) ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಖಾಲಿಯಿರುವ ಮುಖ್ಯ ಗ್ರಂಥಾಲಯಾಧಿಕಾರಿಗಳ ಹುದ್ದೆ ಎಷ್ಟು;

ಆ) ಖಾಲಿ ಇದ್ದಲ್ಲಿ ಅವುಗಳಿಗೆ ಬದಲಿ ವ್ಯವಸ್ಥೆ ಯಾವ ರೀತಿ ಮಾಡಲಾಗಿದೆ;

ಇ) ಬದಲಿ ವ್ಯವಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನವಕರರು ಬಡ್ತಿಗೆ ಅರ್ಹತೆ ಹೊಂದಿದ್ದಾರೆಯೆ;

ಈ) ಅಂತಹ ನೌಕರರಿಗೆ ವಿದ್ಯಾರ್ಹತೆ, ಜೇಷ್ಟತೆ ಆಧಾರದ ಮೇಲೆ ಕೆ.ಸಿ. ಎಸ್.ಆರ್. ನಿಯಮ 32ರ ಅಡಿಯಲ್ಲಿ ವ್ಯವಸ್ಥೆ ಮಾಡಲಾಗಿದೆಯೆ;

ಉ) ವಿದ್ಯಾರ್ಹತೆ, ಜೇಷ್ಯತೆ ಇಲ್ಲದೆ ಇರುವ ನೌಕರರೂ ಸಹ ಮುಖ್ಯ ಗ್ರಂಥಾಲಯ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಬಾಬುರಾವ್ ಚವ್ಹಾಣ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು)

ಅ) 20.

ಆ) ಕೆ.ಸಿ.ಎಸ್.ಆರ್. ನಿಯಮ 68ರ ಪ್ರಕಾರ ಅಧಿಕ ಪ್ರಭಾರ ವ್ಯವಸ್ಥೆ ಮಾಡಲಾಗಿದೆ.

ಇ) ಇಬ್ಬರು ಗ್ರಂಥಪಾಲಕರನ್ನು ಬಿಟ್ಟು ಉಳಿದ ಗ್ರಂಥಪಾಲಕರು ಬಡ್ತಿಗೆ ಅರ್ಹತೆ ಹೊಂದಿರುತ್ತಾರೆ.

ಈ) ಇಲ್ಲ.

ಉ) ಹೌದು. ಇದು ಕೇವಲ ತಾತ್ಕಾಲಿಕ ವ್ಯವಸ್ಥೆ ಇರುತ್ತದೆ.

ಶೋರಾಪುರ ತಾಲ್ಲೂಕಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡುವುದು

4559 (5289) : ಶ್ರೀ ರಾಜಾ ವೆಂಕಟಪ್ಪ ನಾಯಕ್ (ಶೋರಾಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಶೋರಾಪುರ ತಾಲ್ಲೂಕಿನಲ್ಲಿರುವ ಗೆದ್ದಲಮಾರಿ ಮತ್ತು ಸುತ್ತಲ ಗ್ರಾಮಗಳಿಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರದ ಅವಶ್ಯಕತೆ ಇದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರವು ಗೆದ್ದಲಮಾರಿ ಗ್ರಾಮಕ್ಕೆ ಯಾವಾಗ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡುತ್ತದೆ.

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ.

ಆ) ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ 2,97,098 ಇದ್ದು ಈಗಾಗಲೇ 14 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಮಾರ್ಗಸೂಚಿಯ ಪ್ರಕಾರದಂತೆ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ. ಆದ್ದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.